



ಅರುಣ ಪಿ. ಭಟ್ಟ

## ವಾರಭವಿಷ್ಯ: 02.11.2023ರಿಂದ 08.11.2023ರವರೆಗೆ




ಭೂಮಿ ವ್ಯವಹಾರಗಳಲ್ಲಿ ಒಳ್ಳೆಯ ಲಾಭ ಗಳಿಸುವ ಅವಕಾಶ. ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆ ಇದೆ. ಕಾಗದ ಪತ್ರಗಳಿಗೆ ಸಹಿ ಹಾಕುವ ಮುನ್ನ ಪರಿಶೀಲನೆ ನಡೆಸಿ. ಕೆಲವರಿಗೆ ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆ ಹೆಚ್ಚಿದೆ. ಆರೋಗ್ಯ ವಿಚಾರದಲ್ಲಿ ಹೆಚ್ಚಿನ ಆತಂಕ ಪಡುವ ಅಗತ್ಯ ಇಲ್ಲ. ನಿವೇಶನ ಖರೀದಿ ಮಾಡುವವರಿಗೆ ಸ್ಪಷ್ಟತೆ ದೊರೆಯುತ್ತದೆ. ಶುಭದಿನ 07. ಹನುಮಾನ್ ಚಾಲೀಸ್ ಓದಿರಿ.




ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸುವುದಕ್ಕೆ ಶ್ರಮ ಪಡುತ್ತೀರಿ. ಸ್ನೇಹಿತರು ಸಾಲ ಕೇಳಿದರು ಎಂದು ತಕ್ಷಣ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತು, ಹಣ, ಕಾಗದ–ದಾಖಲೆ ಪತ್ರಗಳನ್ನು ನೀವು ಕಳೆದುಕೊಳ್ಳುವ ಅಪಾಯ ಇದೆ. ವಾಹನ ಚಾಲನೆ ಮಾಡುವಾಗ ಎಚ್ಚರ. ಶುಭದಿನ 05. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಸಂಗಾತಿ–ಮಕ್ಕಳಿಗೆ ಬೆಲೆ ಬಾಳುವ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಶುಭದಿನ 04. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ನಿಮ್ಮ ಆದಾಯದಲ್ಲಿ ಈ ವಾರ ಹೆಚ್ಚಳ ಕಾಣಿಸಿಕೊಳ್ಳಲಿದೆ. ಈ ಹಿಂದೆ ನೀವು ಹಾಕಿದ ಶ್ರಮಕ್ಕೆ ಪ್ರತಿಫಲ ದೊರೆಯುತ್ತದೆ. ಸಾಮಾಜಿಕವಾಗಿ ನಿಮ್ಮ ವರ್ಚಸ್ಸು, ಕೀರ್ತಿ ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಯಶಸ್ಸು ದೊರೆಯುವ ಅವಕಾಶ ಹೆಚ್ಚಿದೆ. ಕ್ರೀಡಾ ಕ್ಷೇತ್ರದಲ್ಲಿ ಸರಿಯಾದ ದಾರಿಯಲ್ಲಿ ಸಿದ್ಧತೆ ನಡೆಸುವುದರಿಂದ ಯಶಸ್ಸು. ಹಣಕಾಸಿನ ವ್ಯವಹಾರದಲ್ಲಿ ಅನಿರೀಕ್ಷಿತವಾದ ಬಿಕ್ಕಟ್ಟು. ಶುಭದಿನ 08. ವಿಷ್ಣುಸಹಸ್ರನಾಮ ಓದಿರಿ.




ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದರೆ ಅದರ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಮಕ್ಕಳ ಬೆಳವಣಿಗೆಯಿಂದ ಸಂತೋಷ ಉಂಟಾಗುತ್ತದೆ. ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಶುಭದಿನ 04. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.




ತಾಯಿಯ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ. ನಿಮಗೂ ಕೆಮ್ಮು, ನೆಗಡಿಯಂಥ ಸಮಸ್ಯೆಗಳು ಕಾಡಬಹುದು. ವಾರದ ಮೊದಲಾರ್ಧದ ನಂತರ ಆರ್ಥಿಕವಾಗಿ ಬಲ ಬರುತ್ತದೆ. ಉಳಿತಾಯ ಮಾಡುವ ಕಡೆಗೆ ಮನಸ್ಸು ಹರಿಯುತ್ತದೆ. ಅದಕ್ಕೆ ವ್ಯವಸ್ಥಿತವಾಗಿ ಯೋಜನೆಯನ್ನು ಮಾಡಿಕೊಳ್ಳುವುದು ಉತ್ತಮ. ಮಕ್ಕಳ ಪ್ರಗತಿಯಿಂದ ಹೆಮ್ಮೆ ಉಂಟಾಗುತ್ತದೆ. ಶುಭದಿನ 06. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಉದ್ಯೋಗ ನಿಮಿತ್ತ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ ಆಗಲಿದೆ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಹವಾಮಾನದ ಕಾರಣದಿಂದ ಆರೋಗ್ಯದಲ್ಲೂ ಏರುಪೇರಾಗುತ್ತದೆ. ಸೋದರ–ಸೋದರಿಯರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಶುಭದಿನ 07. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.




ಹೊಸ ಮನೆ ಕಟ್ಟಬೇಕು ಎಂದು ಆಲೋಚನೆ ಮಾಡುವವರಿಗೆ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಸೂಕ್ತ ಸಮಯ. ನೌಕರಸ್ಥರಿಗೆ ಮೇಲಧಿಕಾರಿಗಳ ಜೊತೆಗೆ ಉತ್ತಮ ಸಂಬಂಧ ಇರುತ್ತದೆ. ಪ್ರೀತಿ– ಪ್ರೇಮದಲ್ಲಿ ಇರುವವರು ಪ್ರಮುಖ ವಿಚಾರಗಳ ಚರ್ಚೆ ನಡೆಸಲಿದ್ದೀರಿ. ವಾರದ ಅಂತ್ಯಕ್ಕೆ ಸಕಾರಾತ್ಮಕ ಬೆಳವಣಿಗೆಗಳನ್ನು ಕಾಣುತ್ತೀರಿ. ಶುಭದಿನ 07. ಶಿವಪೂಜೆ, ಶಿವಪಂಚಾಕ್ಷರಸ್ತೋತ್ರ ಪಠಿಸಿರಿ.




ಉದ್ಯೋಗಸ್ಥರಿಗೆ ಮೇಲಧಿಕಾರಿಗಳಿಂದ ಪ್ರಶಂಸೆ. ವ್ಯಾಪಾರಸ್ಥರಿಗೆ ಸಮಸ್ಯೆಗಳು ಎದುರಾಗುವ ಸಂಭವ. ತಲೆನೋವು ಕಾಣಿಸಿಕೊಳ್ಳುತ್ತದೆ. ವಿವಾಹಿತರಿಗೆ ವೈವಾಹಿಕ ಜೀವನ ಚೆನ್ನಾಗಿರುತ್ತದೆ. ಸಂಗಾತಿ ಜೊತೆಗೆ ಸುಮಧುರವಾದ ಕ್ಷಣಗಳನ್ನು ಅನುಭವಿಸಲಿದ್ದೀರಿ. ಭೂಮಿ ಖರೀದಿಗೆ ಒಳ್ಳೆಯ ಸಮಯ. ಮನೆಯಲ್ಲಿ ಶುಭ ಕಾರ್ಯ ನಡೆಯುವ ಸಾಧ್ಯತೆ ಇದೆ. ಶುಭದಿನ 06. ದೇವ್ಯಪರಾಧಕ್ಷಮಾಪಣ ಸ್ತೋತ್ರ ಪಠಿಸಿರಿ.




ಹೆಸರು ಮಾಡಲು ಅದ್ಭುತವಾದ ಅವಕಾಶಗಳು ದೊರೆಯುತ್ತವೆ. ವಿದ್ಯಾರ್ಥಿಗಳು ಅಂದುಕೊಂಡ ಗುರಿಯನ್ನು ತಲುಪಲಿದ್ದೀರಿ. ಕೋರ್ಟ್ ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅದಕ್ಕಾಗಿ ಹೆಚ್ಚಿನ ಹಣ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ವ್ಯಾಪಾರಸ್ಥರಿಗೆ ಮಾರಾಟದ ಗುರಿ ತಲುಪುವಲ್ಲಿ ಹೆಚ್ಚು ಶ್ರಮವೇನೂ ಆಗುವುದಿಲ್ಲ. ಶುಭದಿನ 03. ಸಂಕಷ್ಟಹರ ಮಹಾಗಣಪತಿ ಪೂಜೆ ಮಾಡಿರಿ.




ಕೌಟುಂಬಿಕ ವಿಚಾರಗಳಲ್ಲಿ ಉತ್ತಮ ಪ್ರಗತಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಆರೋಗ್ಯ ಉತ್ತಮವಾಗಿ ಇರುತ್ತದೆ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ, ಅಂತಿಮವಾಗಿ ಅತ್ಯುತ್ತಮವಾದದ್ದನ್ನು ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಶುಭದಿನ 04. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.




ವಾರ ಪೂರ್ತಿ ಕೆಲಸದಲ್ಲೇ ಮಗ್ನರಾಗುತ್ತೀರಿ. ರಕ್ತದಲ್ಲಿನ ದೋಷದಿಂದ ಅನಾರೋಗ್ಯ ಉಂಟಾಗುವ ಸಂಭವವಿದೆ. ಮನೆಯಲ್ಲಿ ಶುಭ ಕಾರ್ಯವೊಂದನ್ನು ಆಯೋಜಿಸುವಿರಿ. ಉದ್ಯೋಗಿಗಳಿಗೆ ನೀವು ಪಟ್ಟ ಶ್ರಮಕ್ಕೆ ಮೇಲಧಿಕಾರಿಗಳಿಂದ ಮೆಚ್ಚುಗೆ ದೊರೆಯುತ್ತದೆ. ವ್ಯಾಪಾರ ವ್ಯವಹಾರ ಮಾಡುತ್ತಿರುವವರಿಗೆ ಆದಾಯದಲ್ಲಿ ಹೆಚ್ಚಳ ಆಗಲಿದೆ. ಶುಭದಿನ 06. ಲಿಂಗಾಷ್ಟಕ ಪಠಿಸಿರಿ.